## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇನಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ರವರ ವಿರುದ್ಧ ಲೋಕಾಯುಕ್ತ ವಿಚಾರಣೆ– ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/491/ಗ್ರಾಪಂಕಾ/2017, ದಿನಾಂಕ:12.07.2017.
2. ಅಪರ ನಿಬಂಧಕರು ವಿಚಾರಣೆಗಳು–09, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE/1038/2017/ARE-09, ದಿನಾಂಕ: 05.11.2018.
3. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE/1038/2017/ARE-09, ದಿನಾಂಕ: 09.11.2018

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇನಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಅಪರ ನಿಬಂಧಕರು ವಿಚಾರಣೆಗಳು–09, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

"ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ ಆದ ನೀವು ನಿಮ್ಮ ತಾಯಿಯ ಹೆಸರಿನಲ್ಲಿದ್ದ ನಿವೇಶನ ಸಂ.95 ಇದನ್ನು ನಿಮ್ಮ ಹೆಂಡತಿಯ ಹೆಸರಿಗೆ ಮಾಡಿಸುವಾಗ ಯಾವುದೇ ದಾಖಲೆಗಳಿಲ್ಲದೆ, ಕರ ನಿರ್ಧಾರಣ ವಹಿಯಲ್ಲಿ ತಿದ್ದುಪಡಿ ಮಾಡಿದ್ದೀರಿ. ಆ ಸಮಯದಲ್ಲಿ ನೀವು ನವಿಲೆ ಗ್ರಾಮ ಪಂಚಾಯಿತಿಯಲ್ಲಿ ಬಿಲ್ ಕಲೆಕ್ಟರ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವುದನ್ನು ಅಲ್ಲಗೆಳೆದಿಲ್ಲ. ಆ ಮೂಲಕ ಸರ್ಕಾರಿ ನೌಕರನಿಗೆ ತಕ್ಕುದಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆಯಿಂದ ವರ್ತಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು (ನಡತೆ) 1966 ರ ನಿಯಮ 3(1)(ii) ಮತ್ತು (iii) ರನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇನಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿರುವುದಿಲ್ಲವೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಉಪಲೋಕಾಯುಕ್ತರು ವಿಚಾರಣಾಧಿಕಾರಿಗಳ ವರದಿಯನ್ನು ಅಂಗೀಕರಿಸಿ ಶ್ರೀ ವಿ.ಎಸ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇನಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ಇವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುವುದಾಗಿ ಶಿಫಾರಸ್ಸು ಸಲ್ಲಿಸಿರುತ್ತಾರೆ.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಅಪರ ನಿಬಂಧಕರು-09, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷಾಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ರವರ ವಿರುದ್ಧ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪಮುಕ್ತರನ್ನಾಗಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/491/ಗ್ರಾಪಂಕಾ/2017,</u>

<u>ಬೆಂಗಳೂರು, ದಿನಾಂಕ: 07-02-2019.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, **ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇನಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ, ರವರ ವಿರುದ್ಧದ ಆರೋಪ ಸಾಬೀತಾಗದಿರುವ ಹಿನ್ನೆಲೆಯಲ್ಲಿ ಸದರಿಯವರನ್ನು ಆರೋಪಮುಕ್ತರನ್ನಾಗಿಸಲು ಆದೇಶಿಸಿದೆ.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

8/2/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ,</u>

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-09, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ.
7. ಶ್ರೀ ವಿ.ಎನ್.ಮಲ್ಲೇಶ್ ಕಾರ್ಯದರ್ಶಿ, ಸಂತೇಶಿವರ ಗ್ರಾಮ ಪಂಚಾಯಿತಿ, ಚಿಕ್ಕೋನಹಳ್ಳಿ ಗೇಟ್, ನುಗ್ಗೇನಹಳ್ಳಿ ಹೋಬಳಿ, ಚನ್ನರಾಯಪಟ್ಟಣ ತಾಲ್ಲೂಕು, ಹಾಸನ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.